# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 114(123) |
| ಸದಸ್ಯರ ಹೆಸರು | ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 01.02.2021 |
| ಉತ್ತರಿಸುವವರು | ಮಾನ್ಯ ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಇಲಾಖೆಯ ನೌಕರರ ಜೇಷ್ಠತಾ ಪಟ್ಟಿಯ ನ್ಯೂನತೆಯನ್ನು ಒಳಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಜೇಷ್ಠತಾ ಪಟ್ಟಿಯಲ್ಲಿನ ನ್ಯೂನತೆಗಳ ಬಗ್ಗೆ ಆಕ್ಷೇಪಣೆಗಳು/ ಮನವಿಗಳು ಸರ್ಕಾರದಲ್ಲಿ ಸ್ವೀಕೃತವಾಗಿವೆ. |
| ಆ) | ಸರ್ಕಾರದ ಸಮಿತಿಯ ವರದಿ ಮತ್ತು ಆದೇಶ ಪಾಲನೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈಗಾಗಲೇ ವೃಂದ ಮುಖ್ಯಸ್ಥರ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣವೇನು: (ಮಾಹಿತಿ ನೀಡುವುದು) | ಅರಣ್ಯ ಇಲಾಖೆಯ ವಿವಿಧ ವೃಂದದ ಜೇಷ್ಠತಾ ಪಟ್ಟಿಗಳಲ್ಲಿರುವ ನ್ಯೂನತೆಗಳನ್ನು ಸರಿಪಡಿಸಲು ಸರ್ಕಾರ ರಚಿಸಿದ ಸಮಿತಿಯ ವರದಿಯನುಸಾರ, ಸರ್ಕಾರ ಹಾಗೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ರವರು ಜೇಷ್ಠತಾ ಪಟ್ಟಿಗಳನ್ನು ತಯಾರಿಸುವ ಕುರಿತು ಎಲ್ಲಾ ವೃತ್ತಗಳ ಮುಖ್ಯಸ್ಥರಿಗೆ ನೀಡಿರುವ ಸೂಚನೆಗಳನ್ನು ಅನುಸರಿಸಿ, ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ಅರಣ್ಯ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಿರುತ್ತಾರೆ.<br>ಈ ಹಿನ್ನೆಲೆಯಲ್ಲಿ ಸಮಿತಿಯ ವರದಿಯನ್ನು ಎಲ್ಲಾ ವೃತ್ತಗಳ ಮುಖ್ಯಸ್ಥರು ಪಾಲನೆ ಮಾಡಿರುವುದರಿಂದ ಅವರ ಮೇಲೆ ಕ್ರಮ ಜರುಗಿಸುವ ಪ್ರಮೇಯ ಉದ್ಭವಿಸುವುದಿಲ್ಲ. |
| ಇ) | ಕ್ರಮ ಜರುಗಿಸಿದ್ದರೆ ಯಾರ ಮೇಲೆ ಜರುಗಿಸಲಾಗಿದೆ? (ವಿವರ ನೀಡುವುದು.) | -ಅನ್ವಯಿಸುವುದಿಲ್ಲ- |

ಸಂಖ್ಯೆ: ಎಫ್‌ಇಇ 45 ಎಫ್‌ಇಜಿ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು.